ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬೃ.ಬೆಂ.ಮ.ಪಾ/ಮು.ಅ/ಯ.ವ/ಪಿ.ಆರ್/135/2014-15

ಮುಖ್ಯಅಭಿಯಂತರವರ ಕಛೇರಿ
ಯಲಹಂಕ ವಲಯ ,ಬೃ.ಬೆಂ.ಮ.ಪಾ.
ಬೆಂಗಳೂರು -92
ದಿನಾಂಕ: 10.02.15

ಆಡಳಿತಾತ್ಮಕ ಅನುಮೋದನೆ

ವಿಷಯ: Estimate for Providing concrete Roads and Drain in Amruthahalli S.C Colony 5th and 6th cross in ward no-07 Byatarayanapura

ಉಲ್ಲೇಖ: 1. ಮುಖ್ಯ ಆರ್ಥಿಕ ಅಧಿಕಾರಿ ರವರ ಕಾಮಗಾರಿ ಸಂಕೇತ:007-15-000049

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕಾರ್ಯಪಾಲಕ ಅಭಿಯಂತರರು (ಬ್ಯಾಟರಾಯನಪುರ ವಿಭಾಗ) ರವರು 2014-15 ಸಾಲಿನ ದರಪಟ್ಟಿಯಂತೆ ಪಿ-1878 ಅನುದಾನದಡಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಯಲಹಂಕ ವಲಯದ ವಾರ್ಡ್ ಸಂಖ್ಯೆ-07 ರಲ್ಲಿ ಮೇಲ್ಕಂಡ ಕಾಮಗಾರಿಯನ್ನು ರೂ 29.00 ಲಕ್ಷಗಳಿಗೆ ಕಾಮಗಾರಿಯನ್ನು ಕೈಗೊಳ್ಳಲು ಉಲ್ಲೇಖ (1)ರಂತೆ ಸದರಿ ಕಾಮಗಾರಿಗೆ ಕಾಮಗಾರಿ ಸಂಕೇತ ದೊರೆತಿರುತ್ತದೆ ಅದರಂತೆ ಕಾರ್ಯಪಾಲಕ ಅಭಿಯಂತರರು (ಬ್ಯಾ.ವಿ) ರವರು ಅಂದಾಜು ಪಟ್ಟಿಯನ್ನು ತಯಾರಿಸಿ ಆಡಳಿತಾತ್ಮಕ ಮಂಜೂರಾತಿಗಾಗಿ ಸಲ್ಲಿಸಿರುತ್ತಾರೆ.

ಮಾನ್ಯ ಆಯುಕ್ತರವರು ಅಧಿಕಾರ ಪ್ರತ್ಯಾಯೋಜಿಸಿ ಹೊರಡಿಸಿರುವ ಆದೇಶ ಸಂಖ್ಯೆ: ಬಿ12(1)/ಪಿ.ಆರ್/394/2011-12 ದಿನಾಂಕ:21-07-2013ರಲ್ಲಿ ನೀಡಿರುವ ಅಧಿಕಾರದನ್ವಯ ಸದರಿ ಕಾಮಗಾರಿಗೆ ಕೆಳಗಿನ ಷರತ್ತುಗಳನ್ವಯ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿದೆ ಹಾಗೂ ಆಡಳಿತಾತ್ಮಕ ಅನುಮೋದನೆ ಪುಸ್ತಕ ಪುಟ ಸಂಖ್ಯೆ 54-55 ಕ್ರ.ಸಂ 135 ರಲ್ಲಿ ಈ ಕೆಳಗಿನ ಷರತ್ತುಗಳಂತೆ ದಾಖಲಿಸಲಾಗಿದೆ.

ಷರತ್ತುಗಳು:

1. ಅಂದಾಜು ಪಟ್ಟಿ ಮೊತ್ತ ರೂ. 2.00 ಲಕ್ಷಗಳಿಗೆ ಮೀರಿದ ಕಾಮಗಾರಿಗಳಿಗೆ ಟೆಂಡರ್ ಕರೆಯುವುದು.
2. ರಸ್ತೆ ಇತಿಹಾಸ ಪುಸ್ತಕದಲ್ಲಿ (Road Hestory Book/register) ಈ ಕೆಲಸದ ವಿವರಗಳನ್ನು ದಾಖಲಿಸಿ ಕ್ರಮಬದ್ದಗೊಳಿಸುವುದು.
3. ಕೆಲಸದ ಸ್ಥಳದಿಂದ ಸಾಗಣೆ ದೂರಕ್ಕೆ ಅನುಮೋದನೆ ಪಡೆಯುವುದು.
4. ಆರ್.ಸಿ.ಸಿ ಡೆಕ್‌ಸ್ಲಾಬ್, ಹರಿನೀರು ಮೋರಿಯ ಆಸರೆಗೋಡೆ ಮತ್ತು ಸೇತುವೆ ಕೆಲಸಗಳ ನಿರ್ವಹಣೆಗೆ ಮೊದಲು ವಿನ್ಯಾಸಕ್ಕೆ ಅನುಮೋದನೆ ಪಡೆಯುವುದು.
5. ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನದಡಿಯಲ್ಲಿ ಭರಿಸುವುದು.

11/2/15
ಮುಖ್ಯ ಅಭಿಯಂತರರು
ಯಲಹಂಕ ವಲಯ
ಬಿ.ಬಿ.ಎಂ.ಪಿ ಬೆಂಗಳೂರು-92

ಪ್ರತಿಯನ್ನು:

1. ಜಂಟಿ ಆಯುಕ್ತರವರು ಯಲಹಂಕ ವಲಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆರವರ ಮಾಹಿತಿಗಾಗಿ.
2. ಕಾರ್ಯಪಾಲಕ ಅಭಿಯಂತರರು, ಬ್ಯಾಟರಾಯನಪುರ ವಿಭಾಗ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರಿಗೆ, ಸೂಕ್ತ ಕ್ರಮಕ್ಕಾಗಿ.
3. ಸಹಾಯಕ ಹಣಕಾಸು ನಿಯಂತ್ರಕರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.
4. ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.